**ದಿನಾಂಕ : 16–04–2022 ರಂದು ಶನಿವಾರ ಬೆಳಗ್ಗೆ 11:00 ಗಂಟೆಗೆ ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ. ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ಮೊಹಮದ್ ಮುದಾಸಿರ್(ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 3. | ಶ್ರೀ. ರಂಗನಾಥ್ (ಕಿರಿಯ ಆರೋಗ್ಯ ಪರಿವೀಕ್ಷಕರು) |
| 4. | ಶ್ರೀ. ಮುರುಗನ್ |
| 5. | ಶ್ರೀ.ಕೆ.ಆರ್.ಸಿ. ವಾರಿಯರ್ಸ್ |
| 6. | ನಿವಾಸಿ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಅಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1) **ಕೋವಿಡ್–19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಮೂರನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ನಲ್ಲಿ ಕೋವಿಡ್–19 ಮೂರನೇ ಅಲೆಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2) **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ:-**

ವಾರ್ಡ್ ವ್ಯಾಪ್ತಿಯ ರಮೇಶ್‌ನಗರ 17ನೇ ಅಡ್ಡರಸ್ತೆ, ವಿನಾಯಕನಗರ , ಅನ್ನಸಂದ್ರಪಾಳ್ಯ ಹಾಗೂ ರೆಡ್ಡಿಪಾಳ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಒಳಚರಂಡಿಯ ಸಮಸ್ಯೆ ಇದ್ದು ಸಮಸ್ಯೆಗಳನ್ನು ಬಗೆಹರಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ, ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ಕೆಲಸ ಪರಿವೀಕ್ಷರಿಗೆ ತಿಳಿಸಲಾಯಿತು.

3) **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಮೇಶ್‌ನಗರ ಹಾಗೂ ಅನ್ನಸಂದ್ರಪಾಳ್ಯ 3ನೇ ಮುಖ್ಯರಸ್ತೆ ಬೀದಿ ದೀಪಗಳು ಸಮರ್ಪಕವಾಗಿ ಉರಿಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

4) **ವಾರ್ಡ್‌ನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ:-**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ಜಗದೀಶ್‌ನಗರ 1ನೇ ಮುಖ್ಯರಸ್ತೆಯಲ್ಲಿ ಡ್ರೈನ್ ಸ್ಲಾಬ್‌ಗಳನ್ನು ಸರಿಪಡಿಸುವಂತೆ, ಜಗದೀಶ್‌ನಗರ ಮುಖ್ಯರಸ್ತೆಯಲ್ಲಿ ರಸ್ತೆಗೆ ಮಾರ್ಕಿಂಗ್ ಮಾಡುವಂತೆ ಸಾರ್ವಜನಿಕರು ಕೋರಿರುತ್ತಾರೆ, ಸದರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

5) **ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ:-**

ಈ ಕುರಿತು ಶ್ರೀ.ಮುರುಗನ್‌ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ 2ನೇ ಮುಖ್ಯರಸ್ತೆ, 17ನೇ ಅಡ್ಡರಸ್ತೆ. ರಮೇಶ್‌ನಗರದಲ್ಲಿ ಚರಂಡಿ ಹೂಳು ತೆಗೆಯಲು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ
ನೋಡೆಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂಯತರರು, ಘನ ತ್ಯಾಜ್ಯ ನಿರ್ವಹಣೆ ಕೆ.ಆರ್.ಪುರಂ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.